ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 20–7–2015

**ಪತ್ರಿಕಾ ಪ್ರಕಟಣೆ**

**ವಿಧಾನ ಮಂಡಲದ ಸುದ್ದಿಗಳು:**

# ಸಮುದ್ರ ಕೊರೆತದಿಂದ ಮೂರು ವರ್ಷದಲ್ಲಿ 42.38 ಹೆಕ್ಟೇರ್ ಪ್ರದೇಶಕ್ಕೆ ಹಾನಿ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಕಳೆದ ಮೂರು ವರ್ಷಗಳಲ್ಲಿ ಸಮುದ್ರ ಕೊರೆತದಿಂದ 42.38 ಹೆಕ್ಟೇರ್ ಪ್ರದೇಶ ಹಾನಿಯಾಗಿದೆ. ಇದೇ ಅವಧಿಯಲ್ಲಿ ಸಮುದ್ರ ಕೊರೆತದಿಂದ ಮನೆ, ಕೃಷಿ ಇತ್ಯಾದಿಗಳನ್ನು ಕಳೆದುಕೊಂಡಿರುವ 173 ಸಂತ್ರಸ್ಥರಿಗೆ ರೂ. 12.31 ಲಕ್ಷ ಪರಿಹಾರ ಧನವನ್ನು ನೀಡಲಾಗಿದೆ ಎಂದು ಜವಳಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಬಾಬುರಾವ್ ಚಿಂಚನಸೂರ್ ಅವರು ಇಂದು ವಿಧಾನಸಭೆಯಲ್ಲಿ ಬೆಳ್ತಂಗಡಿ ಶಾಸಕ ಕೆ. ವಸಂತ ಬಂಗೇರ ಅವರ ಪ್ರಶ್ನೆಗೆ ಉತ್ತರಿಸುತ್ತಾ ತಿಳಿಸಿದ್ದಾರೆ.

ಕಳೆದ ಮೂರು ವರ್ಷಗಳಲ್ಲಿ ಸಮುದ್ರ ಕೊರೆತ ತಡೆಯಲು ಇಲಾಖೆಯಿಂದ ರೂ. 37.38 ಕೋಟಿ, ಜಿಲ್ಲಾಧಿಕಾರಿಗಳ ಪ್ರಾಕೃತಿಕ ವಿಕೋಪ ನಿಧಿಯಿಂದ ರೂ. 11.16 ಕೋಟಿ ಹಾಗೂ ಎ.ಡಿ.ಬಿ. ಯೋಜನೆಯಡಿ 69.59 ಕೋಟಿ ರೂ. ವೆಚ್ಚಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

ಬಾಬು:ಜಿಪಿಆರ್.

# ರಾಜ್ಯದಲ್ಲಿ 14.71 ಲಕ್ಷ ಮಂದಿಗೆ ವಿಧವಾ ವೇತನ

[

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ವಿಧವಾ ಯೋಜನೆಯಡಿ 2015 ರ ಜೂನ್ ಅಂತ್ಯದವರೆಗೆ 14,71,572 ಫಲಾನುಭವಿಗಳು ಪಿಂಚಣಿ ಪಡೆಯುತ್ತಿದ್ದಾರೆ ಎಂದು ಕಂದಾಯ ಸಚಿವ ವಿ. ಶ್ರೀನಿವಾಸ ಪ್ರಸಾದ್ ಅವರು ಇಂದು ವಿಧಾನಸಭೆಯಲ್ಲಿ ತುಮಕೂರು ನಗರದ ಶಾಸಕ ಡಾ. ಎಸ್. ರಫೀಕ್ ಅಹ್ಮದ್ ಅವರ ಪ್ರಶ್ನೆಗೆ ಉತ್ತರಿಸುತ್ತಾ ತಿಳಿಸಿದರು.

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯದಡಿ ಅನುಷ್ಠಾನದಲ್ಲಿರುವ ವಿಧವಾ ವೇತನ ಯೋಜನೆಯಡಿ ಪ್ರತಿ ಫಲಾನುಭವಿಗಳಿಗೆ ರೂ 500/- ಮಾಸಿಕ ಪಿಂಚಣಿಯನ್ನು ನೀಡಲಾಗುತ್ತಿದೆ. ಈ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಪಿಂಚಣಿ ಪಾವತಿಸಲು 2015-16 ನೇ ಸಾಲಿನ 924 ಕೋಟಿ ರೂ. ಗಳನ್ನು ಒದಗಿಸಿದೆ. ಫಲಾನುಭವಿಗಳ ಸಂಖ್ಯೆಯ ಆಧಾರದ ಮೇಲೆ ವೆಚ್ಚವನ್ನು ಭರಿಸಲಾಗುವುದು ಎಂದು ಸಚಿವರು ತಿಳಿಸಿದರು.

ಬಾಬು:ಜಿಪಿಆರ್.

## ರಾಜ್ಯದಲ್ಲಿ 18,823 ರುದ್ರಭೂಮಿಗಳು

[

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಒಟ್ಟಾರೆ 18,823 ರುದ್ರಭೂಮಿಗಳು ಇರುತ್ತವೆ. ಹಿಂದೂ ರುದ್ರಭೂಮಿಗಳ ನಿರ್ವಹಣೆ ಹಾಗೂ ಅಭಿವೃದ್ಧಿಗಾಗಿ ಐದು ವರ್ಷಗಳಲ್ಲಿ 38.14 ಕೋಟಿ ರೂ. ಅನುದಾನವನ್ನು ಒದಗಿಸಲಾಗಿದೆ ಎಂದು ರಾಜ್ಯ ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಮತ್ತು ಮುಜರಾಯಿ ಖಾತೆ ಸಚಿವ ಟಿ. ಬಿ. ಜಯಚಂದ್ರ ಅವರು ವಿಧಾನಸಭೆಯಲ್ಲಿ ಇಂದು ಶಾಸಕರಾದ ಶ್ರೀಮತಿ ವಿನಿಷಾ ನೆರೊ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್.

## ರಾಜ್ಯದಲ್ಲಿ 9830 ಗ್ರಾಮಲೆಕ್ಕಿಗರ ಹುದ್ದೆಗಳು

[

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ರಾಜ್ಯದ ಕಂದಾಯ ಇಲಾಖೆಯಲ್ಲಿ 9830 ಗ್ರಾಮಲೆಕ್ಕಿಗರ ಹುದ್ದೆಗಳು ಮಂಜೂರಾಗಿವೆ. ಇದರಲ್ಲಿ ಹಾಲಿ 8266 ಗ್ರಾಮಲೆಕ್ಕಿಗರು ಕಾರ್ಯನಿರ್ವಹಿಸುತ್ತಿದ್ದು, 1564 ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ಖಾಲಿಯಿದೆ ಎಂದು ಕಂದಾಯ ಸಚಿವ ವಿ. ಶ್ರೀನಿವಾಸಪ್ರಸಾದ್ ಅವರು ಇಂದು ವಿಧಾನಸಭೆಯಲ್ಲಿ ಹಿರೇಕೆರೂರು ಶಾಸಕ ಯು.ಬಿ. ಬಣಕಾರ್ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ವಾಸ್ತವವಾಗಿ ಗ್ರಾಮಲೆಕ್ಕಿಗರುಗಳು ಕರ್ತವ್ಯ ನಿರ್ವಹಿಸುವ ಕೇಂದ್ರ ಸ್ಥಾನದಲ್ಲಿ ವಾಸವಾಗಿರಬೇಕಾಗುತ್ತದೆ. ಆದರೆ ಕೆಲವು ಕಡೆ ಗ್ರಾಮಲೆಕ್ಕಿಗರುಗಳಿಗೆ ಪ್ರತ್ಯೇಕವಾದ ವಸತಿ ಗೃಹಗಳ ಸೌಲಭ್ಯ ಇರುವುದಿಲ್ಲ. ಆದರೂ ಸಹ ಗ್ರಾಮಲೆಕ್ಕಿಗರುಗಳು ಸಾರ್ವಜನಿಕರಿಗೆ ಹಾಗೂ ಸರ್ಕಾರಿ ಕೆಲಸಕ್ಕೆ ಯಾವುದೇ ತೊಂದರೆ ಉಂಟಾಗದಂತೆ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಸಚಿವರು ತಮ್ಮ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್.

**<u>ಪತ್ರಿಕಾ ಪ್ರಕಟಣೆ</u>**

# ಉಭಯ ಸದನಗಳ ಕಾರ್ಯಕಲಾಪಗಳ ನೇರ ಪ್ರಸಾರ: ಉನ್ನತ ಮಟ್ಟದ ಸಮಿತಿ ರಚನೆಗೆ ತೀರ್ಮಾನ

**ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)**

ವಿಧಾನಮಂಡಲ ಉಭಯ ಸದನಗಳ ಕಾರ್ಯಕಲಾಪಗಳ ಆಂತರಿಕ ಹಾಗೂ ನೇರ ಪ್ರಸಾರ ಕುರಿತಂತೆ ವಿಧಾನಸೌಧದ ಸಮಿತಿ ಕೊಠಡಿಯಲ್ಲಿಂದು ಸಮಾಲೋಚನಾ ಸಭೆ ಜರುಗಿತು.

ಪ್ರಸ್ತುತ ಉಭಯ ಸದನಗಳಲ್ಲಿ ಸಿಸಿ ಟಿವಿ ಕ್ಯಾಮರಾ ಮೂಲಕ ಚಿತ್ರೀಕರಣ ನಡೆಸುವ ಉಪಕರಣಗಳು ಮತ್ತು ವ್ಯವಸ್ಥೆ ಸುಮಾರು 20 ವರ್ಷಗಳಷ್ಟು ಹಳೆಯದಾಗಿದ್ದು, ಇದನ್ನು ಮೇಲ್ದರ್ಜೆಗೇರಿಸುವ ನಿಟ್ಟಿನಲ್ಲಿ ಸಭೆಯಲ್ಲಿ ಪೂರಕ ಕ್ರಮ ಕೈಗೊಳ್ಳಲು ವಿಧಾನ ಪರಿಷತ್ ಸಭಾಪತಿಗಳಾದ ಡಿ. ಹೆಚ್. ಶಂಕರಮೂರ್ತಿ, ವಿಧಾನಸಭೆ ಸಭಾಧ್ಯಕ್ಷರಾದ ಕಾಗೋಡು ತಿಮ್ಮಪ್ಪ, ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರಾದ ಟಿ. ಬಿ. ಜಯಚಂದ್ರ, ಮೂಲಭೂತ ಸೌಕರ್ಯ ಅಭಿವೃದ್ಧಿ, ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ ಸಚಿವರಾದ ಆರ್. ರೋಷನ್ ಬೇಗ್, ಅವರನ್ನೊಳಗೊಂಡ ಉನ್ನತ ಮಟ್ಟದ ಸಮಿತಿ ಸಭೆ ರಚನೆಗೆ ತೀರ್ಮಾನಿಸಲಾಯಿತು.

ತಂತ್ರಜ್ಞಾನದಲ್ಲಿ ನಡೆಯುತ್ತಿರುವ ನೂತನ ಆವಿಷ್ಕಾರಗಳಿಗೆ ಅನುಗುಣವಾಗಿ ಆಂತರಿಕ ದೂರದರ್ಶನ ವ್ಯವಸ್ಥೆಯನ್ನು ಮೇಲ್ದರ್ಜೆಗೇರಿಸುವ ಸಂಬಂಧ ಕೇಂದ್ರ ಸರ್ಕಾರಿ ಸ್ವಾಮ್ಯದ BECIL (Broadcast Engineering Consultants India Limited) ಬೆಸಿಲ್ ಸಂಸ್ಥೆ ಸಭೆಗೆ ತಾಂತ್ರಿಕ ಮಾಹಿತಿಯನ್ನು ಒಳಗೊಂಡ ಪ್ರಾತ್ಯಕ್ಷಿಕೆಯನ್ನು ಪ್ರಸ್ತುತಪಡಿಸಿತು.

ಡಿಜಿಟಲ್ ತಂತ್ರಜ್ಞಾನ ಮುಖಾಂತರ ವಿಧಾನಮಂಡಲದ ಉಭಯಸದನಗಳ ಕಾರ್ಯಕಲಾಪಗಳನ್ನು ಪ್ರಸಾರಗೊಳಿಸುವ ಸಲುವಾಗಿ ಬೆಸಿಲ್ ಸಂಸ್ಥೆ ಪ್ರಸ್ತುತ ಪಡಿಸಿದ ತಂತ್ರಜ್ಞಾನದ ಬಗ್ಗೆ ಮಾಹಿತಿ ಪಡೆದುಕೊಳ್ಳಲು ಸಭೆ ತಾತ್ವಿಕ ಒಪ್ಪಿಗೆ ನೀಡಿತು.

ಈಗಾಗಲೇ ಬೆಸಿಲ್ ಸಂಸ್ಥೆ ಲೋಕಸಭೆ ಹಾಗೂ ರಾಜ್ಯಸಭೆಯ ಸದನದ ಕಾರ್ಯಕಲಾಪಗಳ ನೇರ ಪ್ರಸಾರ ಮಾಡುತ್ತಿದ್ದು, ಸಂಸ್ಥೆ ಇದಕ್ಕಾಗಿ ಅಳವಡಿಸಿಕೊಂಡಿರುವ ತಂತ್ರಜ್ಞಾನದ ಬಗ್ಗೆ ಖುದ್ದು ತಿಳಿದುಕೊಳ್ಳಲು ವಿಧಾನಪರಿಷತ್ ಸಭಾಪತಿಗಳಾದ ಡಿ. ಹೆಚ್. ಶಂಕರಮೂರ್ತಿ, ಇವರ ನೇತೃತ್ವದಲ್ಲಿ ನವದೆಹಲಿಗೆ ಭೇಟಿ ನೀಡಲು ನಿರ್ಧರಿಸಲಾಯಿತು.

ವಿಧಾನ ಪರಿಷತ್ ಸಭಾಪತಿಗಳಾದ ಡಿ. ಹೆಚ್. ಶಂಕರಮೂರ್ತಿ, ವಿಧಾನ ಸಭೆಯ ಅಧ್ಯಕ್ಷರಾದ ಕಾಗೋಡು ತಿಮ್ಮಪ್ಪ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾದ ಟಿ. ಬಿ. ಜಯಚಂದ್ರ, ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ ಸಚಿವರಾದ ಆರ್. ರೋಷನ್ ಬೇಗ್, ಕನ್ನಡ, ಸಂಸ್ಕೃತಿ, ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ

ಕಾರ್ಯದರ್ಶಿ ಬಿ. ಜಿ. ನಂದಕುಮಾರ್, ವಾರ್ತಾ ಇಲಾಖೆ ನಿರ್ದೇಶಕ ಎನ್.ಆರ್.ವಿಶುಕುಮಾರ್, ಮತ್ತಿತರರು ಸಭೆಯಲ್ಲಿ ಹಾಜರಿದ್ದರು.
ಪಹೊ/ಅಪ/

# ಅರ್ಜಿ ಆಹ್ವಾನ

**ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)**

**ಕನ್ನಡ ಭಾಷೆ ಕಲೆ, ಸಾಹಿತ್ಯ ಹಾಗೂ ಸಂಸ್ಕೃತಿಗೆ ಸಂಬಂಧಿಸಿದ ವಿಷಯಗಳಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ವಿವಿಧ ಯೋಜನೆಗಳಿಗೆ ಸಹಾಯಧನ ನೀಡಲು ಅರ್ಜಿಗಳನ್ನು ಆಹ್ವಾನಿಸಿದೆ.**

**2014-15 ನೇ ಸಾಲಿನಲ್ಲಿ ವಿಶ್ವ ವಿದ್ಯಾನಿಲಯಗಳಿಂದ ಯಾವುದೇ ವಿಷಯದ ಬಗ್ಗೆ ಕನ್ನಡದಲ್ಲಿ ಎಂ.ಫಿಲ್ ಪದವಿ ಪಡೆದ ಪ್ರೌಢ ಪ್ರಬಂಧಗಳ ಹಸ್ತಪ್ರತಿ ಮುದ್ರಣಕ್ಕೆ ಸಹಾಯಧನ, 2014-15 ನೇ ಸಾಲಿನಲ್ಲಿ ವಿಶ್ವವಿದ್ಯಾನಿಲಯಗಳಿಂದ ಯಾವುದೇ ವಿಷಯದ ಬಗ್ಗೆ ಕನ್ನಡದಲ್ಲಿ ಪಿಎಚ್.ಡಿ. ಪದವಿ ಪಡೆದ ಮಹಾಪ್ರಬಂಧಗಳ ಹಸ್ತಪ್ರತಿ ಮುದ್ರಣಕ್ಕೆ ಸಹಾಯಧನ, ಸರ್ಕಾರ ಜನವರಿಯಿಂದ ಡಿಸೆಂಬರ್ 2014 ರೊಳಗೆ ಪ್ರಥಮ ಅವೃತ್ತಿಯಾಗಿ ಪ್ರಕಟವಾಗಿರುವ ಸೃಜನೇತರ ಕನ್ನಡ ಗ್ರಂಥಗಳಿಗೆ ಸಹಾಯಧನ ನೀಡಲಿದೆ.**

**ಅರ್ಜಿಯನ್ನು ಇಲಾಖೆಯ ವೆಬ್‌ಸೈಟ್ www.kannadasiri.co.in ನಲ್ಲಿ ಪಡೆಯಬಹುದಾಗಿದೆ. ಭರ್ತಿಮಾಡಿದ ಅರ್ಜಿಗಳನ್ನು ದಾಖಲೆಗಳ ಸಹಿತ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು - 560 002 ಇವರಿಗೆ ದಿನಾಂಕ: 17-08-20156 ರ ಒಳಗಾಗಿ ಕಳುಹಿಸಿಕೊಡಲು ಕೊನೆಯ ದಿನಾಂಕವಾಗಿದೆ. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.**

ಬಾಬು:ಜಿಪಿಆರ್.

# ತಾಲ್ಲೂಕು ಸಂಯೋಜಕರ ನೇಮಕ

**ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)**

**ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಯೋಜನೆಗಳನ್ನು ಗ್ರಾಮ ಪಂಚಾಯತಿ ಮತ್ತು ನಗರ ವಾರ್ಡ್ ಮಟ್ಟದಲ್ಲಿ 'ಏಕ ಗವಾಕ್ಷಿ ಸೇವಾ ಕೇಂದ್ರಗಳ ' ಮೂಲಕ ಒದಗಿಸುವ ಯೋಜನೆಯನ್ನು ರಾಜ್ಯದ ಪ್ರತಿ ಜಿಲ್ಲೆಯ ಒಂದು ತಾಲ್ಲೂಕಿನಲ್ಲಿ ಅನುಷ್ಠಾನಗೊಳಿಸಲು ಕರ್ನಾಟಕ ಸರ್ಕಾರ, ಕಾರ್ಮಿಕ ಇಲಾಖೆ ತೀರ್ಮಾನಿಸಿದೆ. ಈ ಯೋಜನೆಯಡಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸಲು 'ತಾಲ್ಲೂಕು ಸಂಯೋಜಕರ ' ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

**ಈ ಹುದ್ದೆಯು ತಾತ್ಕಾಲಿಕವಾಗಿದ್ದು, ಹೊರಗುತ್ತಿಗೆ ಆಧಾರದ ಮೇಲೆ ಮಾನವ ಸಂಪನ್ಮೂಲ ಸಂಸ್ಥೆಯ ಮೂಲಕ 1 ವರ್ಷದ ಅವಧಿಗೆ ನೇಮಕಾತಿ ಮಾಡಿಕೊಳ್ಳಲಾಗುವುದು. (6 ತಿಂಗಳ ಕಾರ್ಯಕ್ಷಮತೆಯ ಆಧಾರದ**

ಮೇಲೆ ಮುಂದಿನ ಅವಧಿಗೆ ಮುಂದುವರೆಸಲಾಗುವುದು) ಈ ಕೆಳಕಂಡ ಅನುಭವ ಮತ್ತು ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಸಾಮಾಜಿಕ ವಿಜ್ಞಾನಗಳಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಮತ್ತು ಕನಿಷ್ಠ ಶೇ 65 ರಷ್ಟು ಅಂಕಗಳನ್ನು ಗಳಿಸಿರಬೇಕು.

ಕನಿಷ್ಠ 5 ವರ್ಷ ಗ್ರಾಮೀಣಾಭಿವೃದ್ಧಿ, ಆರೋಗ್ಯ, ಶೈಕ್ಷಣಿಕ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳ ಅನುಷ್ಠಾನದಲ್ಲಿ ಕೆಲಸ ನಿರ್ವಹಿಸಿದ ಅನುಭವ ಹೊಂದಿರಬೇಕು. ಸಾಮಾಜಿಕ ಭದ್ರತಾ ಯೋಜನೆಗಳಲ್ಲಿ, ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಅಥವಾ ವಿಶ್ವಬ್ಯಾಂಕ್ ನೆರವಿನ ಪ್ರಾಯೋಜಿತ ಕಾರ್ಯಕ್ರಮಗಳಲ್ಲಿ ಕೆಲಸ ನಿರ್ವಹಿಸಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಓದುವ ಮತ್ತು ಬರೆಯುವ ಪರಿಣಿತಿ ಹೊಂದಿರಬೇಕು. ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಗರಿಷ್ಠ ವಯೋಮಿತಿ 45 ವರ್ಷಗಳು. ಮಾಸಿಕ ಕ್ರೋಢೀಕೃತ ವೇತನ ರೂ. 18,000/- (ಎಲ್ಲಾ ಭತ್ಯೆಗಳು ಸೇರಿ)

ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಪ್ರಕಟಣೆ ಪ್ರಕಟವಾದ ದಿನಾಂಕದಿಂದ 7 ದಿವಸಗಳ ಒಳಗೆ ವಿವರವಾದ ದಾಖಲಾತಿಗಳೊಂದಿಗೆ (ಅಂಕಪಟ್ಟಿ ಮತ್ತು ಅನುಭವ ಪ್ರಮಾಣ ಪತ್ರ ಹಾಗೂ ಸ್ವ ವಿವರಗಳೊಂದಿಗೆ) ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು, ಏಕ ಗವಾಕ್ಷಿ ಸೇವಾ ಯೋಜನೆ ಇವರ ಹೆಸರಿಗೆ ಅರ್ಜಿ ಬರೆದು ಸ್ವ ವಿವರಗಳೊಂದಿಗೆ ಕಾರ್ಮಿಕ ಅಧಿಕಾರಿಗಳ ಕಚೇರಿ, ಉಪ ವಿಭಾಗ-5, "ಕಾರ್ಮಿಕ ಭವನ" ಐಟಿಐ ಆವರಣ, ಡೈರಿ ಸರ್ಕಲ್ ಹತ್ತಿರ, ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560 029 ಈ ವಿಳಾಸಕ್ಕೆ ಅರ್ಜಿ ಸಲ್ಲಿಸಬೇಕು.

ಬಾಬು:ಜಿಪಿಆರ್.

# ಕಾರ್ಗಿಲ್ ವಿಜಯ ದಿವಸ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

1999 ರಲ್ಲಿ ನಡೆದ ಕಾರ್ಗಿಲ್ ಯುದ್ಧದಲ್ಲಿ ಜಯವನ್ನು ತಂದು ಕೊಡಲು ದೇಶಕ್ಕಾಗಿ ಪ್ರಾಣತೆತ್ತ ವೀರ ಯೋಧರ/ಹುತಾತ್ಮರ ಸ್ಮರಣೀಯ ಸಂಕೇತವಾಗಿ ಪ್ರತಿ ವರ್ಷದಂತೆ, ಈ ವರ್ಷವೂ ಸಹ ಕಾರ್ಗಿಲ್ ವಿಜಯ ದಿವಸದ ಆಚರಣೆಯನ್ನು ಜುಲೈ 25 ರಂದು (ಭಾನುವಾರ) ರಂದು ಪೂರ್ವಾಹ್ನ 8.20 ರಿಂದ 9.30 ರ ವರೆಗೆ ಬೆಂಗಳೂರಿನ ರಾಷ್ಟ್ರೀಯ ಮಿಲಿಟರಿ ಸ್ಮಾರಕ, ಶ್ರೀಮತಿ ಇಂದಿರಾಗಾಂಧಿ ಸಂಗೀತ ಕಾರಂಜಿ ಉದ್ಯಾನವನದ ಹತ್ತಿರ, ಚೌಡಯ್ಯ ರಸ್ತೆ, ನೆಹರು ತಾರಾಲಯದ ಎದುರು, ರಾಜ ಭವನದ ಹತ್ತಿರ, ಬೆಂಗಳೂರು – 560 001, ರಲ್ಲಿ ಆಚರಿಸಲಾಗುವುದು.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಗೌರವ ಅತಿಥಿಗಳಾಗಿ ಗೃಹ ಸಚಿವ ಕೆ.ಜೆ. ಜಾರ್ಜ್ ಆಗಮಿಸಲಿರುವರು.

ಈ ಸಮಾರಂಭದಲ್ಲಿ ಸೇವಾನಿರತ/ನಿವೃತ್ತ ಹಿರಿಯ ಸೇನಾಧಿಕಾರಿಗಳು, ಮಾಜಿ ಸೈನಿಕರು ಮತ್ತು ಹಿರಿಯ ನಾಗರೀಕ ಸೇವೆಯ ಅಧಿಕಾರಿಗಳು, ಎನ್‌ಸಿಸಿ ಕೆಡೆಟ್, ಶಾಲಾ ಮಕ್ಕಳು ಆಗಮಿಸುವರು.

**ವೀರ ಯೋಧರ ಗೌರವ ವಂದನೆಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಈ ಸಮಾರಂಭದಲ್ಲಿ ಪಾಲ್ಗೊಳ್ಳುವಂತೆ ಕೋರಲಾಗಿದೆ.**

ಬಾಬು:ಜಿಪಿಆರ್.